**By RPAD**

# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 58 ಗ್ರಾಪಂಕಾ 2016, ದಿನಾಂಕ:22-02-2016 ಹಾಗೂ ತಿದ್ದೋಲೆ ದಿನಾಂಕ:05-06-2017.
2. ಅಪರ ನಿಬಂಧಕರು ವಿಚಾರಣೆಗಳು-8 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-1/DE-109/2016/ARE-8, ದಿನಾಂಕ:17.02.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ:Uplok-1/DE-109/2016/ARE-8, ದಿನಾಂಕ:20.02.2018.
4. ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: Uplok-1/DE-109/2016/ARE-8, ದಿನಾಂಕ:21.02.2018.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿರವರು 2010-11 ಮತ್ತು 2011-12ನೇ ಸಾಲಿನಲ್ಲಿ ಕೊಂಚಿಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಬಿಜ್ಜೂರು ಗ್ರಾಮದಲ್ಲಿ (1)ಚರಂಡಿ ನಿರ್ಮಾಣ, (2)ಬದು ನಿರ್ಮಾಣ, (3)ಕೃಷಿ ಹೊಂಡ ನಿರ್ಮಾಣ, (4) ಭೂಮಿಯ ಸಮತಟ್ಟು, (5)ರಸ್ತೆಗಳ ನಿರ್ಮಾಣ, (6)ಅರಣ್ಯ ಇಲಾಖೆಗೆ ಸಂಬಂಧಪಟ್ಟ ಕಾಮಗಾರಿ ಹಾಗೂ (7)ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ನಿರ್ವಹಿಸದೆ ಕೂಲಿ ಕಾರ್ಮಿಕರಿಗೆ ರೂ.35,125/-ಗಳನ್ನು ಬಟವಾಡೆ ಮಾಡಿರುವುದಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಕೂಲಿಕಾರರ ನಕಲಿ ಸಹಿಗಳನ್ನು ಮಾಡಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡು ಸರ್ಕಾರಕ್ಕೆ ಮೋಸ ಮಾಡಿರುವುದಲ್ಲದೇ, ಕರ್ತವ್ಯ ನಿರ್ಲಕ್ಷತೆಯನ್ನು ಮಾಡಿರುತ್ತೀರಿ. ಆದ ಕಾರಣ ಸರ್ಕಾರಿ ಆಪಾದಿತ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೇ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಕೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು ನೀವು ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ )ನಿಯಮಾವಳಿ 1966ರ 3(1)(i) ರಿಂದ (iii)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುತ್ತಾರೆ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ಇವರ ವಿರುದ್ಧದ ಆರೋಪದ ಕುರಿತು ನೋಟಿಸ್ ಜಾರಿ ಮಾಡಲು ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಗದಗ ಜಿಲ್ಲೆ ರವರಿಗೆ ನೀಡಲಾಗಿತ್ತು. ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಗದಗ ಜಿಲ್ಲೆ ರವರು ಆಪಾದಿತ ನೌಕರರಾದ ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ರವರು ಮೃತ ಪಟ್ಟಿರುವುದಾಗಿ ವರದಿ ನೀಡಿರುತ್ತಾರೆಂದು ಅಪರ ನಿಬಂಧಕರು, ವಿಚಾರಣೆಗಳು-8 ರವರು ಮಾನ್ಯ ಉಪಲೋಕಾಯುಕ್ತರಿಗೆ ವರದಿ ಸಲ್ಲಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-8, ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ರವರು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ಆಪಾದಿರ ನೌಕರರು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆ ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 106 ಗ್ರಾಪಂಕಾ 2018**
**ಬೆಂಗಳೂರು, ದಿನಾಂಕ:04-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ರವರು ದಿನಾಂಕ:08-09-2017 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/4/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಗದಗ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ (ದಿವಂಗತ ಶ್ರೀ ಮಲ್ಲೇಶಪ್ಪ ಗುಡದಯ್ಯ ಬಾರ್ಕಿ, ನಿವೃತ್ತ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕೊಂಚಿಗೇರಿ ಗ್ರಾಮ ಪಂಚಾಯಿತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ, ರವರ ಕುಟುಂಬದವರಿಗೆ ಜಾರಿ ಮಾಡಿ ವರದಿ ನೀಡಲು ತಿಳಿಸಲಾಗಿದೆ)
7. ಗಣಕ ಕೋಶ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.